# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೆರಡನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

## ಸೋಮವಾರ, ದಿನಾಂಕ: 07ನೇ ಡಿಸೆಂಬರ್, 2020

## (ಸಮಯ: ಬೆಳಗ್ಗೆ: 11.00 ಗಂಟೆಗೆ)

* * *

### 01. ಸಂತಾಪ ಸೂಚನೆಗಳು

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಒಂದನೇ ಮತ್ತು ಎರಡನೇ ಪಟ್ಟಿಯ ರೀತ್ಯಾ.

### 03. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಸಭೆಯಲ್ಲಿ ಮಂಡಿಸುವುದು.

### 04. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

### 05. ಶಾಸನ ರಚನೆ

<u>ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು</u>

**ಕರ್ನಾಟಕ ಭೂ ಸುಧಾರಣೆಗಳ (ಎರಡನೇ ತಿದ್ದುಪಡಿ) ವಿಧೇಯಕ, 2020**

**ಶ್ರೀ ಆರ್.ಅಶೋಕ** (ಮಾನ್ಯ ಕಂದಾಯ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಕರ್ನಾಟಕ ಭೂ ಸುಧಾರಣೆಗಳ (ಎರಡನೇ ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 06. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಮರಿತಿಬ್ಬೇಗೌಡ** ಅವರು ಕೋವಿಡ್-19 ಹಿನ್ನೆಲೆಯಲ್ಲಿ ಆರ್ಥಿಕ ಮುಗ್ಗಟ್ಟಿನಿಂದಾಗಿ ಅನುದಾನ ರಹಿತ ಶಾಲಾ ಕಾಲೇಜುಗಳು, ಪಾಲಿಟೆಕ್ನಿಕ್ ಮತ್ತು ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ವೇತನ ಪಾವತಿಸದೆ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

02. **ಶ್ರೀಮತಿ ಎಸ್. ವೀಣಾ ಅಚ್ಚಯ್ಯ** ಅವರು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು, ಇಲ್ಲಿನ ನಿರ್ದೇಶಕರನ್ನು ಪ್ರತಿನಿಯೋಜನೆ ನಿಯಮಾವಳಿಗೆ ವಿರುದ್ಧವಾಗಿ ಕಳೆದ 9 ವರ್ಷಗಳಿಂದ ಮುಂದುವರೆಸಿಕೊಂಡು ಬಂದಿರುವುದರಿಂದ ಸಂಸ್ಥೆಯ ಗುಣಮಟ್ಟ ಕುಂಠಿತವಾಗಿರುವ ಕುರಿತು ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

## 07. ನಿಯಮ 330ರ ಮೇರೆಗೆ

01. **ಶ್ರೀ ಕೆ.ಟಿ. ಶ್ರೀಕಂಠೇಗೌಡ ಮತ್ತು ಶ್ರೀ ಮರಿತಿಬ್ಬೇಗೌಡ** ಅವರುಗಳು ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆ, ಪದವಿಪೂರ್ವ ಮತ್ತು ಪದವಿ ಕಾಲೇಜುಗಳಲ್ಲಿ ನಿವೃತ್ತಿ/ ರಾಜೀನಾಮೆ/ಇನ್ನಿತರೆ ಕಾರಣಗಳಿಂದ ತೆರವಾಗಿರುವ ಬೋಧಕ ಹುದ್ದೆಗಳ ಭರ್ತಿ ಹಾಗೂ 1986ರಿಂದ 1995ನೇ ಸಾಲಿನವರೆಗೆ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ ಪ್ರಸ್ತಾವನೆಗಳಿಗೆ ಆರ್ಥಿಕ ಇಲಾಖೆಯು ಕೋವಿಡ್-19ರ ಹಿನ್ನೆಲೆಯಲ್ಲಿ ಅನುಮೋದನೆ ನೀಡಲು ಸಾಧ್ಯವಿಲ್ಲವೆಂದು ಆದೇಶಿಸಿರುವ ಕುರಿತು ಪ್ರಸ್ತಾಪಿಸುವುದು.

02. **ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಮಾನ್ಯ ಸರ್ಕಾರಿ ಮುಖ್ಯ ಸಚೇತಕರು)** ಅವರು ಬೆಳಗಾವಿ ಜಿಲ್ಲೆಯ ಪಶ್ಚಿಮ ಘಟ್ಟ ಪ್ರದೇಶದಲ್ಲಿ ವಾಸಿಸುತ್ತಿರುವ ಜನರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**